# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 898 (912) |
| ಸದಸ್ಯರ ಹೆಸರು | : | ಡಾ|| ಯತೀಂದ್ರ ಎಸ್ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 15.12.2025 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವರುಣಾ ವಿಧಾನ ಸಭಾ ವ್ಯಾಪ್ತಿಯ ಮೆಲ್ಲಹಳ್ಳಿ ಗ್ರಾಮದ ಸರ್ವೆ ನಂ. 232 ರಲ್ಲಿ ಸರ್ಕಾರಿ ಸಿ.ಪಿ.ಸಿ ಕಾಲೇಜು ಉದ್ದೇಶಕ್ಕಾಗಿ 5 ಎಕರೆ ಜಾಗವನ್ನು ಕಾಯ್ದಿರಿಸಲಾಗಿದ್ದು, ಸದರಿ ಜಾಗದ ಸುತ್ತಮುತ್ತ ಸಾಕಷ್ಟು ಪ್ರತಿಭಾವಂತ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ. ವ್ಯಾಸಂಗ ಮುಗಿಸಿ ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ನಗರ ಪ್ರದೇಶಗಳಿಗೆ ವಲಸೆ ತೆರಳುತ್ತಿದ್ದಾರೆ. ಹೀಗಾಗಿ ಸದರಿ ಜಾಗದಲ್ಲಿ ಸರ್ಕಾರಿ ಸಿ.ಪಿ.ಸಿ. ಕಾಲೇಜಿನ ಮತ್ತೊಂದು ವಿಭಾಗವನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ? (ವಿವರ ಒದಗಿಸುವುದು) | ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜು ನರಸಿಂಹರಾಜ ವಿಧಾನಸಭಾ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿದೆ.<br><br>ವರುಣಾ ವಿಧಾನ ಸಭಾ ವ್ಯಾಪ್ತಿಯ ಮೆಲ್ಲಹಳ್ಳಿ ಗ್ರಾಮವು ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜಿನಿಂದ 15 ಕಿ.ಮೀ., ದೂರವಿರುತ್ತದೆ.<br><br>ಆದ್ದರಿಂದ, ಮೆಲ್ಲಹಳ್ಳಿ ಗ್ರಾಮದಲ್ಲಿ ಸರ್ಕಾರಿ ಸಿ.ಪಿ.ಸಿ., ಕಾಲೇಜಿನ ಮತ್ತೊಂದು ವಿಭಾಗವನ್ನು ತೆರೆಯಲು ಸಾಧ್ಯವಾಗುವುದಿಲ್ಲ. ಹೊಸ ಸರ್ಕಾರಿ ಪಾಲಿಟೆಕ್ನಿಕ್ ನ್ನು ಪ್ರಾರಂಭಿಸಬೇಕಾಗುತ್ತದೆ.<br><br>ಆದರೆ, ಉನ್ನತ ಶಿಕ್ಷಣ ಇಲಾಖೆಗೆ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನದಲ್ಲಿ ಅಭಿವೃದ್ಧಿಗಾಗಿ ಸೀಮಿತ ಅನುದಾನ ಲಭ್ಯವಿರುತ್ತದೆ. ಸದರಿ ಅನುದಾನದಲ್ಲಿ ಪ್ರಸ್ತುತ ಇರುವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಬಲವರ್ಧನೆಗೊಳಿಸಲಾಗುತ್ತಿದೆ.<br><br>ವರುಣಾ ವಿಧಾನ ಸಭಾ ವ್ಯಾಪ್ತಿಯ ಮೆಲ್ಲಹಳ್ಳಿ ಗ್ರಾಮದಲ್ಲಿ ಸರ್ಕಾರಿ ಸಿ.ಪಿ.ಸಿ., ಕಾಲೇಜಿನ ಮತ್ತೊಂದು ವಿಭಾಗವನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿ ಇರುವುದಿಲ್ಲ. |

**ಸಂಖ್ಯೆ: ಇಡಿ 389 ಟಿಇಸಿ 2025**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು